# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1046**

ಸದಸ್ಯರ ಹೆಸರು : **ಶ್ರೀ. ಐವನ್ ಡಿ'ಸೋಜಾ (ವಿಧಾನ ಸಭಾ ಕ್ಷೇತ್ರ)**

ಉತ್ತರಿಸುವ ದಿನಾಂಕ : **16/12/2025**

ಉತ್ತರಿಸುವ ಸಚಿವರು : **ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮಂಗಳೂರು ಮಹಾನಗರ ಪಾಲಿಕೆ ಚುನಾವಣೆ ನಡೆಸಲು ಸರ್ಕಾರ ತೀರ್ಮಾನಿಸಿದೆಯೇ; ಯಾವಾಗ ಚುನಾವಣೆ ನಡೆಸಲಾಗುವುದು (ವಿವರ | ಮಂಗಳೂರು ಮಹಾನಗರ ಪಾಲಿಕೆಯಲ್ಲಿನ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿಯು ದಿನಾಂಕ:28/02/2025 ರಂದು ಮುಕ್ತಾಯಗೊಂಡಿರುತ್ತದೆ. |
| ಆ | ಮಂಗಳೂರು ಮಹಾನಗರ ಪಾಲಿಕೆಯನ್ನು ಬೃಹತ್ ಪಾಲಿಕೆಯನ್ನಾಗಿ ಮಾರ್ಪಾಡುಗೊಳಿಸಿ ಪ್ರಸ್ತುತ ಇರುವ ನಗರ ಪಾಲಿಕೆಯ ಸುತ್ತಮುತ್ತಲಿನ ಪ್ರದೇಶಗಳನ್ನು ಮಹಾನಗರ ಪಾಲಿಕೆಗೆ ಸೇರಿಸುವ ಪ್ರಸ್ತಾವನೆ ಇಲಾಖೆ ಮುಂದಿದೆಯೇ (ವಿವರ ನೀಡುವುದು); | ಪ್ರಸ್ತುತ, ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಸುತ್ತಮುತ್ತಲಿನ ಯಾವುದೇ ಪ್ರದೇಶಗಳನ್ನು ಸೇರ್ಪಡೆಗೊಳಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |
| ಇ | ಮಂಗಳೂರು ಮಹಾನಗರ ಪಾಲಿಕೆ ಮುಂದಿನ ಚುನಾವಣೆಯಲ್ಲಿ ವಾರ್ಡುವಾರು ಮೀಸಲಾತಿಯನ್ನು ಮಾಡಲಾಗಿದೆಯೇ; ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ (ವಿವರ ನೀಡುವುದು)? | ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡಿರುವ ಕಾರಣ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 34 ಎಂಎಲ್ಆರ್ 2025; ದಿನಾಂಕ:20/03/2025 ರನ್ವಯ ಸುಗಮ ಆಡಳಿತ ನಿರ್ವಹಣೆಗಾಗಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡ ಮರುದಿನದಿಂದಲೇ ಅನ್ವಯವಾಗುವಂತೆ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರನ್ನು ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿರುತ್ತದೆ. ಮಹಾನಗರ ಪಾಲಿಕೆಗಳಲ್ಲಿನ ವಾರ್ಡುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 240 ಎಂಎಲ್ಆರ್ 2013; ದಿನಾಂಕ:02/02/2015 ರನ್ವಯ ನಿಗದಿಪಡಿಸಿರುವ ಮಾರ್ಗಸೂಚಿಯನ್ನು ಅನುಸರಿಸುತ್ತಿದ್ದು, ಪ್ರಸ್ತುತ, ಮಂಗಳೂರು ಮಹಾನಗರ ಪಾಲಿಕೆಯಲ್ಲಿನ ವಾರ್ಡುವಾರು ಚುನಾವಣೆಗಳಿಗಾಗಿ ಸರ್ಕಾರದಿಂದ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |

**ಸಂಖ್ಯೆ:ನಅಇ 58 ಎಲ್‌ಸಿಕ್ಯೂ 2025**

**(ಬಿ ಎಸ್ ಸುರೇಶ)**

**ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು**